ಕರ್ನಾಟಕ ವಿಧಾನಸಭೆ

ಸೋಮವಾರ, ದಿನಾಂಕ: 11ನೇ ಅಕ್ಟೋಬರ್, 2010ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10 ಗಂಟೆ 05 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರಾದ ಶ್ರೀ ಕೆ.ಜಿ. ಬೋಪಯ್ಯರವರು

ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು.

(ಮಾನ್ಯ ವಿರೋಧ ಪಕ್ಷದ ಸದಸ್ಯರು ಸದನದ ಬಾವಿಯಲ್ಲಿದ್ದರು)

(ಗೊಂದಲ)

(ಮಾನ್ಯ ಸಭಾಧ್ಯಕ್ಷರು ಪೀಠದಲ್ಲಿ ಉಪಸ್ಥಿತರಿದ್ದರು)

(ಗೊಂದಲ)

ಅಧ್ಯಕ್ಷರು : ದಯವಿಟ್ಟು ಸದನದ ಬಾವಿಯಲ್ಲಿರುವ ಸದಸ್ಯರುಗಳೆಲ್ಲರೂ ತಮ್ಮ ತಮ್ಮ ಆಸನಗಳಿಗೆ ಹಿಂದಿರುಗಿ ಕಲಾಪ ನಡೆಸಲು ಅನುವು ಮಾಡಿಕೊಡಬೇಕೆಂದು ಮನವಿ ಮಾಡಿಕೊಳ್ಳುತ್ತೇನೆ.

(ಗೊಂದಲ)

ಅಧ್ಯಕ್ಷರು : ದಯವಿಟ್ಟು ಎಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಹಿಂದಿರುಗಿ.

(ಗೊಂದಲ)

ಅಧ್ಯಕ್ಷರು : ದಯವಿಟ್ಟು ಎಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಹಿಂದಿರುಗಿ.

(ಗೊಂದಲ)

1. ಪ್ರಕಟಣೆ:

ಅಧ್ಯಕ್ಷರು : ಕರ್ನಾಟಕ ವಿಧಾನ ಸಭೆಯ ಸದಸ್ಯರುಗಳ ಅನರ್ಹತೆಯ ನಿಯಮಗಳು 1986ರ ಮೇರೆಗೆ ವಿಧಾನ ಸಭೆಯ ಈ ಕೆಳಕಾಣಿಸಿದ ಸದಸ್ಯರುಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅನರ್ಹಗೊಳಿಸಲಾಗಿದೆ ಎಂದು ಸದನದ ಗಮನಕ್ಕೆ ತರುತ್ತಿದ್ದೇನೆ.

(ಗೊಂದಲ)